ಮನೆ ನಿವೇಶನದ ಹಕ್ಕು ಪತ್ರಕ್ಕಾಗಿ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡುವುದು.

ಚುಕ್ಕೆ ಗುರ್ತಿಲ್ಲದ ಪ್ರಶ್ನೆ ಸಂಖ್ಯೆ : 672(901)

ಸದಸ್ಯರ ಹೆಸರು : ಶ್ರೀ ಅಪ್ಪಚ್ಚು ರಂಜನ್(ಸೋಮವಾರಪೇಟೆ)

ಉತ್ತರಿಸುವ ಸಚಿವರು : ಮಾನ್ಯ ಶ್ರೀ ಹೆಚ್.ಸಿ.ಶ್ರೀಕಂಠಯ್ಯ(ಕಂದಾಯ ಸಚಿವರು)

ಪ್ರಶ್ನೆ

ಅ) ಮನೆ ನಿವೇಶನ ಹಕ್ಕು ಪತ್ರಕ್ಕಾಗಿ ಫಾರಂ ನಂ.1ರ ಅರ್ಜಿ ಸಲ್ಲಿಸಲು ಸಾಧ್ಯವಾದ ಬಡ ಕಾರ್ಮಿಕರಿಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ಮೀರಿರುವುದರಿಂದ ಕಾಲಾವಕಾಶ ವಿಸ್ತರಿಸಲಾಗುವುದೆ; ಇಲ್ಲದಿದ್ದಲ್ಲಿ ಇದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

ಆ) ಒತ್ತುವರಿ ಮಾಡಿಕೊಂಡಿರುವ ಜಾಗವನ್ನು ಸಕ್ರಮಗೊಳಿಸಲು ಫಾರಂ ಸಂ.53ನ್ನು ಸಲ್ಲಿಸಲು ಸಮಯಾವಕಾಶವನ್ನು ಮುಂದುವರಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇಲ್ಲದಿದ್ದಲ್ಲಿ ಇದನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದೇ?

ಉತ್ತರ

ಅ) ಅರ್ಜಿ ಸಲ್ಲಿಸಲು ಕಾಲಾವಕಾಶವನ್ನು 01-4-2001ರಿಂದ ದಿನಾಂಕ:01-01-2002ರವರೆಗೆ ವಿಸ್ತರಿಸಲಾಗಿದೆ ಮತ್ತೆ ಮುಂದುವರೆಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಉದ್ದೇಶಿತ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 673(1306)

ಮಾನ್ಯ ಸದಸ್ಯರ ಹೆಸರು : ಶ್ರೀ ಅಪ್ಪಚ್ಚುರಂಜನ್ ಎಂ.ಪಿ. (ಸೋಮವಾರಪೇಟೆ)

ಉತ್ತರಿಸುವ ಸಚಿವರು : ಶ್ರೀ ಧರ್ಮಸಿಂಗ್(ಲೋಕೋಪಯೋಗಿ ಸಚಿವರು)

ಪ್ರಶ್ನೆ

1) ಉದ್ದೇಶಿತ ಬೆಂಗಳೂರು-ಮೈಸೂರು ಕಾರಿಡಾರ್ ಯೋಜನೆ ಈಗ ಯಾವ